# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007
ದೂರವಾಣಿ ಸಂಖ್ಯೆ:08192-208029, ಫ್ಯಾಕ್ಸ್:08192-208008

। ವಿದ್ಯಾದಾನೇನ ವರ್ಧತೆ, ವಿದ್ಯಾ ವಿನಯೇನ ಶೋಭತೆ, ವಿದ್ಯಯಾ ವಿಂದತೆ ಅಮೃತಂ ।

ಸಂಖ್ಯೆ:ದಾವಿವಿ/ಶೈಕ್ಷಣಿಕ ವಿಭಾಗ/167/2026-2027/ 2330 ದಿನಾಂಕ:14.08.2026

## ಅಧಿಸೂಚನೆ-2

**ವಿಷಯ:** 2026-27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ (PG) ಪದವಿ ಕೋರ್ಸ್‌ಗಳ ಖಾಲಿ ಇರುವ ರಿಕ್ತ ಸ್ಥಾನಗಳನ್ನು ಭರ್ತಿ ಮಾಡಲು ಪ್ರವೇಶಾತಿಗೆ ಅರ್ಜಿ ಆಹ್ವಾನಿಸುವ ಕುರಿತು.

**ಉಲ್ಲೇಖ:**
1) ವಿಶ್ವವಿದ್ಯಾನಿಲಯದ ಪರಿಷ್ಕೃತ ಅಧಿಸೂಚನೆ ಪತ್ರ ಸಂಖ್ಯೆ:ದಾವಿವಿ/ಶೈಕ್ಷಣಿಕ ವಿಭಾಗ/167/2026-27/2138, ದಿನಾಂಕ:05.08.2026
2) ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ:14.08.2026

******

ವಿಶ್ವವಿದ್ಯಾನಿಲಯದ ಕೇಂದ್ರ ಕಛೇರಿಯಲ್ಲಿ, ಚಿತ್ರದುರ್ಗದ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ 2026-27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ (PG) ಪದವಿ ಕೋರ್ಸ್‌ಗಳಿಗೆ ಉಲ್ಲೇಖ (1)ರ ಪ್ರವೇಶಾತಿ Counselling ಪ್ರಕ್ರಿಯೆಯ ನಂತರ ಖಾಲಿ ಉಳಿದಿರುವ ರಿಕ್ತ ಸ್ಥಾನಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಪುನಃ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ ಮೂಲಕ ಅರ್ಜಿಯನ್ನು Download ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ:18.08.2026 ರಿಂದ 24.08.2026 ರಂದು ಬೆಳಿಗ್ಗೆ 11.30 ಗಂಟೆಯೊಳಗೆ ಸಂಬಂಧಪಟ್ಟ ಸ್ನಾತಕೋತ್ತರ ಅಧ್ಯಯನ ವಿಭಾಗ, ಶಿವಗಂಗೋತ್ರಿ, ದಾವಣಗೆರೆ ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ದಿನಾಂಕ:24.08.2026ರಂದು ಪ್ರವೇಶ ಪರೀಕ್ಷೆ ಮತ್ತು ಖಾಲಿ ಸೀಟುಗಳಿಗೆ Counselling ಪ್ರಕ್ರಿಯೆ ಕೈಗೊಳ್ಳಲಾಗುವುದು. Counselling ಗೆ ಒದಗಿಸಬೇಕಾದ ಅಗತ್ಯ ದಾಖಲೆ ಹಾಗೂ ಶುಲ್ಕದ ವಿವರಗಳನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಪ್ರಥಮ ಅಧಿಸೂಚನೆಯಡಿ ಈಗಾಗಲೇ ಅರ್ಜಿ ಸಲ್ಲಿಸಿ ಪ್ರವೇಶಾತಿ ಪಡೆಯದೇ ಇರುವ ಅಭ್ಯರ್ಥಿಗಳು ಮತ್ತೊಮ್ಮೆ ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ (ಅವರ ಮೆರಿಟ್ ಆಧಾರದ ಮೇಲೆ ನೇರ ಕೌನ್ಸಿಲಿಂಗ್‌ಗೆ ಹಾಜರಾಗಬಹುದು).

**ಸೂಚನೆ:** ಹೆಚ್ಚಿನ ವಿವರಗಳಿಗಾಗಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಯಕ್ಷರು/ಸಂಯೋಜನಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಹಾಗೂ ಈ-ಪ್ರಾಸ್ಪೆಕ್ಟಸ್ (E-Prospectus) ಗಾಗಿ ದಾವಣಗೆರೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ಗೆ www.davangereuniversity.ac.in ಭೇಟಿ ನೀಡತಕ್ಕದ್ದು.

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007

ಗೆ,

1) ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ಸಂಯೋಜನಾಧಿಕಾರಿಗಳು –ಸೂಕ್ತ ಕ್ರಮಕ್ಕಾಗಿ ಹಾಗೂ ನಿಯಮಾನುಸಾರ ಪ್ರವೇಶಾತಿ ಪಡೆದುಕೊಳ್ಳಲು ಸೂಚಿಸಲಾಗಿದೆ.
2) ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.

ಪ್ರತಿ:

1. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ/ಕುಲಸಚಿವರ ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ.
2. ಕಛೇರಿ ಪ್ರತಿ.